ಶ್ರೀ ಬಿ.ಎನ್. ಬಚ್ಚೇಗೌಡ (ನಗರಾಭಿವೃದ್ಧಿ ಸಚಿವರು) :

ಅ) ಪಟ್ಟಣ ಪಂಚಾಯಿತಿಗಳಿಗೆ ಒಳಚರಂಡಿ ಹಾಗೂ ನೀರು ಸರಬರಾಜು ಮಾಡುವ ಯೋಜನೆಗಳನ್ನು ನಗರಾಭಿವೃದ್ಧಿ ಇಲಾಖೆಯ ಮೂಲಕವೇ ಕಾರ್ಯಗತಗೊಳಿಸಲಾಗುತ್ತಿದೆ.

ಆ) ಮೇಲಿನ ಉತ್ತರಗಳಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಂಖ್ಯೆ

715 - ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ವಿದ್ಯಾರ್ಥಿನಿಲಯಗಳನ್ನು ಬಾಡಿಗೆ ಕಟ್ಟಡದಲ್ಲಿ ನಡೆಸಲಾಗುತ್ತಿರುವ ಸಂಖ್ಯೆ ಎಷ್ಟು?

ಆ) ಹಿಂದುಳಿದ ವಿದ್ಯಾರ್ಥಿನಿಲಯಗಳಲ್ಲಿ ಕಳಪೆ ದರ್ಜೆಯ ಆಹಾರವನ್ನು ಒದಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಮಾಲೀಕಯ್ಯ ವಿ. ಗುತ್ತೇದಾರ್ (ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :

ಅ) 694 ವಿದ್ಯಾರ್ಥಿನಿಲಯಗಳನ್ನು ಬಾಡಿಗೆ ಕಟ್ಟಡದಲ್ಲಿ ನಡೆಸಲಾಗುತ್ತಿದೆ.

ಆ) ಇಲ್ಲ.

ಚಾಮರಾಜನಗರದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆ

715 - ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಈ ವರ್ಷ ಎಷ್ಟು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ತೆರೆಯಲಾಗುವುದು?

ಆ) ಯಾವ ಯಾವ ಪ್ರದೇಶಗಳಲ್ಲಿ ತೆರೆಯಲಾಗುವುದು?

ಇ) ಚಾಮರಾಜನಗರಕ್ಕೆ ಒಂದು ವಸತಿ ಶಾಲೆಯನ್ನು ಮಂಜೂರು ಮಾಡಲು ಸರ್ಕಾರದವರು ತೀರ್ಮಾನಿಸಿದ್ದಾರೆಯೇ?

ಶ್ರೀ ಮಾಲಿಕಯ್ಯ ವಿ. ಗುತ್ತೇದಾರ್ (ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :

ಅ) ಪ್ರಸಕ್ತ ವರ್ಷದಲ್ಲಿ ಹೊಸದಾಗಿ ಒಂದು ಮೊರಾರ್ಜಿ ದೇಸಾಯಿ ವಸತಿಶಾಲೆಯನ್ನು ತೆರೆಯಲು ಉದ್ದೇಶಿಸಲಾಗಿದೆ.

ಅ) ಮೈಸೂರು ಜಿಲ್ಲೆಯ ಕೇರ್ಗಳ್ಳಿ ಗ್ರಾಮದಲ್ಲಿ ತೆರೆಯಲು ಉದ್ದೇಶಿಸಲಾಗಿದೆ.

ಇ) ಇಲ್ಲ.

ಚಾಮರಾಜನಗರದಲ್ಲಿ ಕುಡಿಯುವ ನೀರಿನ ಯೋಜನೆ

711- ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಾಮರಾಜನಗರವು ಸೇರಿದಂತೆ ಹಿಂದುಳಿದ ಗಡಿ ಪ್ರದೇಶಗಳಲ್ಲಿ ಕುಡಿಯುವ ನೀರಿನ ಯೋಜನೆಯನ್ನು ಎಷ್ಟು ಪಟ್ಟಣಗಳಲ್ಲಿ ಪ್ರಾರಂಭಿಸಲಾಗಿದೆ.

ಆ) ಈ ಯೋಜನೆಯ ಪ್ರಗತಿಯ ವಿವರಗಳೇನು?

ಇ) ಚಾಮರಾಜನಗರ ರಾಮಸಮುದ್ರ ಒಳಚರಂಡಿ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಬಿ.ಎನ್. ಬಚ್ಚೇಗೌಡ (ನಗರಾಭಿವೃದ್ಧಿ ಸಚಿವರು) :

ಅ) ಗಡಿ ಪ್ರದೇಶವಾದ ಚಾಮರಾಜನಗರ ಜಿಲ್ಲೆಯಲ್ಲಿ ಚಾಮರಾಜನಗರ ಮತ್ತು ಗುಂಡ್ಲು ಪೇಟೆ ಪಟ್ಟಣಗಳಲ್ಲಿ ಕುಡಿಯುವ ನೀರಿನ ಯೋಜನೆಗಳನ್ನು ಪ್ರಾರಂಭಿಸಲಾಗಿದೆ.

ಆ) ***ಚಾಮರಾಜನಗರ ನೀರು ಸರಬರಾಜು ಯೋಜನೆಯ ಪ್ರಗತಿ :***

ಈ ಯೋಜನೆಯ ಮೂಲಸ್ಥಾವರ, ಕೊಳವೆ ಮಾರ್ಗ, ನೀರು ಶುದ್ಧೀಕರಣಾಗಾರ ಹಾಗೂ ಒಂದು ಮೇಲ್ಮಟ್ಟದ ಜಲ ಸಂಗ್ರಹಾಗಾರಕ್ಕೆ ಗುತ್ತಿಗೆದಾರರನ್ನು ನೇಮಿಸಲಾಗಿದ್ದು ಗುತ್ತಿಗೆದಾರರು ಮೂಲಸ್ಥಾವರದ ಉಳಿಕೆ ಕೆಲಸವನ್ನು ಈಗಾಗಲೇ ಪ್ರಾರಂಭಿಸಿರುತ್ತಾರೆ. ಇಲ್ಲಿಯವರೆಗೆ ಈ ಯೋಜನೆಗೆ ರೂ. 129.46 ಲಕ್ಷಗಳನ್ನು ಖರ್ಚು ಮಾಡಲಾಗಿದೆ.

ಗುಂಡ್ಲುಪೇಟೆ ಪಾದೇಶಿಕ ನೀರು ಸರಬರಾಜು ಯೋಜನೆ :

ಸದರೀ ಯೋಜನೆಗೆ ಈವರೆಗೆ 191.90 ಲಕ್ಷ ರೂ. ಗಳನ್ನು ಖರ್ಚು ಮಾಡಲಾಗಿದೆ. ಈ ಯೋಜನೆಯ ಪ್ರಮುಖ ಕಾಮಗಾರಿಯಾದ 39.31 ಕಿ.ಮೀ. ಉದ್ದ 500 ಮಿ. ಮೀ. ವ್ಯಾಸದ ಏರು ಕೊಳವೆ ಮಾರ್ಗದ ಕೆಲಸವು ಪ್ರಗತಿಯಲ್ಲಿದ್ದು ಇಲ್ಲಿಯವರೆಗೆ 15.22 ಕಿ.ಮೀ. ಕೊಳವೆ ಸರಬರಾಜಾಗಿದ್ದು 10.83 ಕಿ.ಮೀ. ಗಳನ್ನು ಅಳವಡಿಸಲಾಗಿದೆ. ದೇಬೂರು ಹತ್ತಿರ ಮೂಲಸ್ಥಾವರದ ಕೆಲಸ ಕೈಗೆತ್ತಿಕೊಳ್ಳಬೇಕಾಗಿದೆ.

ಜಲ ಶುದ್ಧೀಕರಣಾಗಾರಕ್ಕೆ ಬೇಕಾದ ಜಮೀನನ್ನು ಸಿಂದೂವಳ್ಳಿಪುರದ ಹತ್ತಿರ ಸ್ವಾಧೀನಪಡಿಸಿಕೊಳ್ಳುವ ಹಂತದಲ್ಲಿದೆ. ಬೂಸ್ಟರ್ ಪಂಪ್‌ಹೌಸ್‌ಗೆ ಬೇಕಾದ ಜಮೀನನ್ನು ತಗ್ಗೂರು ಗ್ರಾಮದ ಹತ್ತಿರ ಸ್ವಾಧೀನಪಡಿಸಿಕೊಳ್ಳಲಾಗಿದೆ. ಈ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಬೇಕಾಗಿದೆ. ಪಟ್ಟಣದಲ್ಲಿ ಎರಡು ಮೇಲ್ಮಟ್ಟದ ಜಲಸಂಗ್ರಹಾಗಾರದ ಕೆಲಸವು ಗುತ್ತಿಗೆದಾರರಿಂದ ಮೊದಲನೇ,